ನಿಯಮಾವಳಿಗಳ ಪ್ರಕಾರ ಎಂ ಆರ್ ಐ ಈ ಉಪಕರಣವು ಅತ್ಯಾವಶ್ಯಕವಾಗಿ ಬೇಕಾಗಿರುವುದರಿಂದ ಕಲರ್ ಡಾಪ್ಲರ್ ಮತ್ತು ಇತರೆ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳನ್ನು ಖರೀದಿಸಲು ಸಹ ಟೆಂಡರ್ ಕರೆಯಲಾಗಿದ್ದು, ಟೆಂಡರ್‌ನ ವಿವಿಧ ಹಂತದ ಪ್ರಕ್ರಿಯೆಗಳು ಮುಗಿದಿದ್ದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಹಂತದಲ್ಲಿದೆ ಹಾಗೂ ಕೆ ಆರ್ ಆಸ್ಪತ್ರೆ, ಮೈಸೂರು ಇಲ್ಲಿನ ಟ್ರಾಮಾ ಕೇರ್ ಸೆಂಟರ್ ಪ್ರಾರಂಭಿಸಲು ರೂ 150 00 ಲಕ್ಷಗಳಿಗೆ ಕೇಂದ್ರ ಸರ್ಕಾರದ ಸಹಾಯಾನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ

658 (1069) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ಸಾಂಕ್ರಾಮಿಕ ರೋಗಗಳು ಹರಡುತ್ತಿವೆ?

ಆ) ಸಾಂಕ್ರಾಮಿಕ ರೋಗವನ್ನು ತಡೆಗಟ್ಟಲು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಯಾವ ರೀತಿಯ ಕ್ರಮವನ್ನು ಕೈಗೊಳ್ಳಲಾಗಿದೆ?

ಇ) ಇದಕ್ಕಾಗಿ ಪ್ರತಿ ವರ್ಷ ಮೀಸಲಿಡಲಾಗುತ್ತಿರುವ ಹಣ ಎಷ್ಟು?

ಈ) ಇದರಲ್ಲಿ ಖರ್ಚಾದ ಹಣ ಎಷ್ಟು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿ ಕಾಲರಾ, ಕರಳುಬೇನೆ, ವಿಷಮಶೀತ ಜ್ವರ, ಕಾಮಾಲೆ, ಮಂಗನಕಾಯಿಲೆ ಮತ್ತು ಇಲಿಜ್ವರ, ಚಿಕೂನ್ ಗುನ್ಯ ಇತ್ಯಾದಿ ಸಾಂಕ್ರಾಮಿಕ ರೋಗಗಳು ಆಗಾಗ ಸಂಭವಿಸುತ್ತಿವೆ

ಆ) **ಈ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು,**

ಜಿಲ್ಲಾ ಮಟ್ಟದಲ್ಲಿ

- ಜಿಲ್ಲಾ ಸಾಂಕ್ರಾಮಿಕ ರೋಗಗಳ ಕಣ್ಗಾವಲು ಘಟಕವು ಕುಡಿಯುವ ನೀರಿನಿಂದ ಹರಡುವ ರೋಗಗಳನ್ನು ತಡೆಯಲು ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆ ಮಾಡುತ್ತಿದೆ
- ಈ ಪರೀಕ್ಷೆ ಫಲಿತಾಂಶದ ಆಧಾರದ ಮೇಲೆ ಯೋಗ್ಯವಲ್ಲದ ನೀರಿನ ಮೂಲಗಳನ್ನು ತಕ್ಷಣ ಕ್ಲೋರಿನೇಷನ್ ಮಾಡಲಾಗುತ್ತಿದೆ

ಮತ್ತು ಗ್ರಾಮಪಂಚಾಯತ್, ಮುನಿಸಿಪಾಲಿಟಿಗಳಿಗೆ ಸುರಕ್ಷಿತ ಕುಡಿಯುವ ನೀರನ್ನು ಪೂರೈಸಲು ಸೂಚನೆಗಳನ್ನು ನೀಡಲಾಗುತ್ತಿದೆ

- ಸಾಂಕ್ರಾಮಿಕ ರೋಗಗಳು ಸಂಭವಿಸಿದಾಗ ನಿಯಂತ್ರಣಾ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಮಟ್ಟದಲ್ಲಿ ಕ್ಷಿಪ್ರ ಕಾರ್ಯಾಚರಣೆ ಪಡೆ ತಕ್ಷಣ ಕಾರ್ಯಪ್ರವೃತ್ತರಾಗುತ್ತಿದ್ದಾರೆ
- ಜೀವರಕ್ಷಕ ಹಾಗೂ ಇತರೆ ಎಲ್ಲಾ ಅವಶ್ಯಕ ಔಷಧಿಗಳನ್ನು ಹಾಗೂ ಕ್ರಿಮಿ/ಕೀಟನಾಶಕಗಳನ್ನು ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ಒದಗಿಸಲಾಗಿದೆ
- ಮಂಗನಕಾಯಿಲೆ ಪೀಡಿತ ಐದು ಜಿಲ್ಲೆಗಳ ಪ್ರದೇಶಗಳಲ್ಲಿ ಅರ್ಹ ಜನರಿಗೆ ರೋಗ ನಿರೋಧಕ ಲಸಿಕೆಗಳನ್ನು ನೀಡಲಾಗುತ್ತಿದೆ
- ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು ಸಾಂಕ್ರಾಮಿಕ ರೋಗಗಳ ಸಮನ್ವಯ ಸಮಿತಿಯ ಸಭೆಯಲ್ಲಿ ಎಲ್ಲಾ ಸಾಂಕ್ರಾಮಿಕ ರೋಗಗಳ ನಿಯಂತ್ರಣಾ ಕಾರ್ಯಗಳನ್ನು ಪರಿಶೀಲಿಸಿ, ಅಧ್ಯಕ್ಷರು ಸೂಚಿಸಿರುವ ಕ್ರಮಗಳನ್ನು ಸಹ ಅನುಷ್ಠಾನಗೊಳಿಸಲಾಗುತ್ತಿದೆ

ತಾಲ್ಲೂಕು ಮಟ್ಟದಲ್ಲಿ

- ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ತಾಲ್ಲೂಕು ಆರೋಗ್ಯಾಧಿಕಾರಿಗಳ ನೇತೃತ್ವದಲ್ಲಿ ಕ್ಷಿಪ್ರ ಕಾರ್ಯಾಚರಣೆ ಪಡೆ ಕಾರ್ಯನಿರ್ವಹಿಸುತ್ತಿದೆ
- ಸಾಂಕ್ರಾಮಿಕ ರೋಗಗಳು ಸಂಭವಿಸದಂತೆ ಪ್ರತಿ ಗ್ರಾಮದಲ್ಲೂ ಸಕ್ರಿಯ ರೋಗ ಸಮೀಕ್ಷೆಯನ್ನು ನಿರಂತರವಾಗಿ ಮಾಡಿಸಲಾಗುತ್ತಿದೆ
- ನೇರ ಸಂಪರ್ಕ ಹಾಗೂ ಇತರೆ ಮಾಧ್ಯಮಗಳ ಮೂಲಕ ಜನಸಾಮಾನ್ಯರಿಗೆ ಸಾಂಕ್ರಾಮಿಕ ರೋಗಗಳ ಬಗ್ಗೆ ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ

ಕೇಂದ್ರ ಸರ್ಕಾರದ ರಾಷ್ಟ್ರೀಯ ಗ್ರಾಮೀಣ ಅಭಿಯಾನ ಅಡಿಯಲ್ಲಿ ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಗಳನ್ನು ರಚಿಸಿದ್ದು ಹಾಗೂ ಪ್ರತಿ ಗಾಮ ಸಮಿತಿಗೆ ರೂ 10,000 ಅನುದಾನವನ್ನು ಆರೋಗ್ಯ ಮತ್ತು ನೈರ್ಮಲ್ಯ ಕಾಪಾಡಲು ನೀಡುವ ಯೋಜನೆ ಜಾರಿಯಲ್ಲಿದೆ

ಉಪಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಇವುಗಳಿಗೆ ಮುಕ್ತನಿಧಿ ಅನುದಾನ ನೀಡಿದ್ದು ಸಾಂಕ್ರಾಮಿಕ ರೋಗ ತಡೆಗಟ್ಟಲು ಸಹ ಕ್ರಮ ಕೈಗೊಳ್ಳಲಾಗಿದೆ

ಆ) ಇದಕ್ಕೆಂದು ಪ್ರತ್ಯೇಕ ಹಣವನ್ನು ನಿಗದಿಪಡಿಸಿರುವುದಿಲ್ಲ ಈ ಕಾಯಿಲೆಗಳ ನಿವಾರಣೆಗಾಗಿ ಗ್ರಾಮಮಟ್ಟದಲ್ಲಿ ವಿವಿಧೋದ್ದೇಶ ಕಾರ್ಯಕರ್ತರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಉಪ ಕೇಂದ್ರಗಳಿಗೆ ತಲಾ 5 ಸಾವಿರದಂತೆ, ತಾಲ್ಲೂಕು ಆರೋಗ್ಯ ಕೇಂದ್ರಗಳಿಗೆ ತಲಾ 1 ಲಕ್ಷದಂತೆ ಔಷಧೇತರಕ್ಕೆ ನೀಡಲಾಗುತ್ತಿದೆ ಇಂತಹ ಸಾಂಕ್ರಾಮಿಕ ರೋಗಗಳು ಬಂದಾಗ ಔಷಧಿ ಹಾಗೂ ರಸಾಯನಿಕಗಳನ್ನು ಉಪಯೋಗಿಸಿಕೊಳ್ಳಲಾಗುತ್ತಿದೆ 2006–07ನೇ ಸಾಲಿನಲ್ಲಿ ಚಿಕೂನ್ ಗುನ್ಯಾ ರೋಗವು ಸಾಂಕ್ರಾಮಿಕ ರೂಪ ತಾಳಿದ್ದು ಇದಕ್ಕಾಗಿ ವಿಶೇಷವಾಗಿ ರೂ 877 00 ಲಕ್ಷಗಳನ್ನು ಮೀಸಲಿಡಲಾಗಿತ್ತು

ಈ) ಚಿಕೂನ್ ಗುನ್ಯಾಕ್ಕೆ ಮೀಸಲಾಗಿಟ್ಟ ಮೊತ್ತದಲ್ಲಿ ರೂ 777 00 ಲಕ್ಷಗಳನ್ನು ಖರ್ಚು ಮಾಡಲಾಗಿದೆ

659 (970) ಶ್ರೀ ವೆಂಕಟಮುನಿಯಪ್ಪ ಬಿ ಪಿ (ಬೇತಮಂಗಲ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2005–06ನೇ ಸಾಲಿನಲ್ಲಿ ಮಂಜೂರಾದ 129 ವೈಯಕ್ತಿಕ ಕೊಳವೆ ಬಾವಿಗಳಲ್ಲಿ 49 ಹಾಗೂ 2006–07ನೇ ಸಾಲಿನಲ್ಲಿ ಮಂಜೂರಾದ 119 ವೈಯಕ್ತಿಕ ಕೊಳವೆ ಬಾವಿಗಳನ್ನು ಇನ್ನೂ ಕೊರೆಯಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಆರ್ಥಿಕ ವರ್ಷ ಅಂತ್ಯವಾಗುತ್ತಿದ್ದರೂ ಕೊಳವೆ ಬಾವಿಗಳನ್ನು ಕೊರೆಯಿಸದ ಇಲಾಖಾಧಿಕಾರಿಗಳ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು?

ಇ) ಹಾಗಿದ್ದಲ್ಲಿ, ಮಂಜೂರಾಗಿರುವ ವೈಯಕ್ತಿಕ ಕೊಳವೆ ಬಾವಿಗಳನ್ನು ಕೊರೆಯಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) 2005–06ನೇ ಸಾಲಿನಲ್ಲಿ ಕೋಲಾರ ಜಿಲ್ಲೆಯ ಬೇತಮಂಗಲ ಕ್ಷೇತ್ರಕ್ಕೆ ನಿಗದಿಪಡಿಸಿದ ಗುರಿ ಈ ಕೆಳಕಂಡಂತಿವೆ